159ಸಿ6
(5A)

**ಕರ್ನಾಟಕ ವಿಧಾನ ಪರಿಷತ್ತು**

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಸುನೀಲಗೌಡ ಬಿ. ಪಾಟೀಲ್ ಇವರು ನಿಯಮ-330 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಉತ್ತರ.**

***

**ವಿಷಯ:** ಸ್ಥಳೀಯ ಸ್ವಯಂ ಆಡಳಿತ ಹೊಂದಿರುವ ಗ್ರಾಮ ಪಂಚಾಯತಿಗಳು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅತ್ಯಂತ ಮಹತ್ವದ ಪಾತ್ರ ವಹಿಸುತ್ತಿವೆ. ಈ ಗ್ರಾಮ ಪಂಚಾಯತಿಗಳಿಗೆ ಚುನಾಯಿತರಾಗಿ ಬರುವ ಪ್ರತಿನಿಧಿಗಳು ಗ್ರಾಮಗಳ ಅಭಿವೃದ್ಧಿಯಲ್ಲಿ ಅತ್ಯಂತ ನಿರ್ಣಾಯಕ ಪಾತ್ರ ವಹಿಸುತ್ತಾರೆ. ಸರ್ಕಾರದ ಹಲವಾರು ಜನಪರ ಯೋಜನೆಗಳು ಅತ್ಯಂತ ಕಟ್ಟಕಡೆಯ ವ್ಯಕ್ತಿಗೆ ತಲುಪುವಲ್ಲಿ ಗ್ರಾಮ ಪಂಚಾಯತಿಗಳಿಗೆ ಆಯ್ಕೆಯಾಗಿ ಬರುವ ಸದಸ್ಯರು ಅತ್ಯಂತ ಮಹತ್ವದ ಪಾತ್ರ ವಹಿಸುತ್ತಾರೆ. ಪ್ರಸ್ತುತ ಗ್ರಾಮ ಪಂಚಾಯತಿ ಸದಸ್ಯರ ಅಧಿಕಾರ ಅವಧಿ ಮುಗಿದು ಸುಮಾರು 6 ರಿಂದ 7 ತಿಂಗಳುಗಳಾಗುತ್ತಾ ಬಂದಿದೆ, ಇದರಿಂದಾಗಿ ಗ್ರಾಮಗಳ ಅಭಿವೃದ್ಧಿಯಲ್ಲಿ ಸ್ವಲ್ಪ ಮಟ್ಟಿನ ಹಿನ್ನಡೆಯಾಗಿರುತ್ತದೆ. ಆದ್ದರಿಂದ ಗ್ರಾಮ ಪಂಚಾಯತಿಗಳಿಗೆ ಶೀಘ್ರವಾಗಿ ಚುನಾವಣೆಯನ್ನು ಮಾಡಬೇಕೆಂದು ವಿಷಯ ಕುರಿತು.

******

**ಉತ್ತರ:** 2026ರ ಜನವರಿ ತಿಂಗಳಿನಲ್ಲಿ 1116, ಫೆಬ್ರುವರಿ ತಿಂಗಳಿನಲ್ಲಿ 4557, ಮಾರ್ಚ್ ತಿಂಗಳಿನಲ್ಲಿ 12, ಏಪ್ರಿಲ್ ತಿಂಗಳಿನಲ್ಲಿ 27, ಮೇ ತಿಂಗಳಿನಲ್ಲಿ 7, ಜೂನ್ ತಿಂಗಳಿನಲ್ಲಿ 2, ಮತ್ತು ಜುಲೈ ತಿಂಗಳಿನಲ್ಲಿ 7 ಗ್ರಾಮ ಪಂಚಾಯಿತಿಗಳು ಸೇರಿದಂತೆ ಒಟ್ಟು 5728 ಗ್ರಾಮ ಪಂಚಾಯಿತಿಗಳ ಅವಧಿಯು ಮುಕ್ತಾಯವಾಗಲು ಪ್ರಾರಂಭವಾಗಿರುವುದರಿಂದ, ಗ್ರಾಮ ಪಂಚಾಯಿತಿಗಳಲ್ಲಿ ಪರಿಪೂರ್ಣವಾದ ಆಡಳಿತಾತ್ಮಕ ವ್ಯವಸ್ಥೆಯ ಕೊರತೆ ಉಂಟಾಗಿ (Administrative Vacum), ದೈನಂದಿನ ಕಾರ್ಯನಿರ್ವಹಣೆಗೆ ಬಾಧಕ ಉಂಟಾಗುವುದರಿಂದ ಅಧಿನಿಯಮದ ಪ್ರಕರಣ 8 ರ ಉಪಬಂಧಗಳನುಸಾರ ಗ್ರಾಮ ಪಂಚಾಯಿತಿಗಳ ಅವಧಿ ಮುಕ್ತಾಯಗೊಂಡ ನಂತರ ಆಡಳಿತಾಧಿಕಾರಿಗಳನ್ನು ನೇಮಿಸಿ ಅಧಿಸೂಚಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪಂ 1003 ಗ್ರಾಪಂಅ 2025, ದಿನಾಂಕ:16.01.2026ರಂದು ನಿರ್ದೇಶನ ನೀಡಲಾಗಿದೆ. ಅದರ ಪ್ರಕಾರ ಜಿಲ್ಲಾಧಿಕಾರಿಗಳು ಕ್ರಮ ವಹಿಸಿರುತ್ತಾರೆ.

ಈ ರೀತಿ ನೇಮಕಗೊಂಡ ಗ್ರಾಮ ಪಂಚಾಯತಿಯ ಆಡಳಿತಾಧಿಕಾರಿಯು ಅಧಿನಿಯಮದ ಪ್ರಕರಣ 62 ರಂತೆ ಎಲ್ಲಾ ಪ್ರಕಾರ್ಯಗಳು ಮತ್ತು ಅಧಿಕಾರಗಳನ್ನು ನಿರ್ವಹಿಸಲು ಅಧಿಕಾರ ಹೊಂದಿರುತ್ತಾರೆ. ಇದರಿಂದಾಗಿ ಗ್ರಾಮಗಳ ಅಭಿವೃದ್ಧಿಯಲ್ಲಿ ಹಿನ್ನಡೆಯಾಗಿರುವುದು ಕಂಡು ಬಂದಿರುವುದಿಲ್ಲ.

ಸರ್ಕಾರದ ಸುತ್ತೋಲೆ ಸಂಖ್ಯೆ: RDPR 486 GPA 2025, ದಿನಾಂಕ:01-06-2026 ರಲ್ಲಿ ಗ್ರಾಮ ಪಂಚಾಯತಿಗಳ ಸಾರ್ವತ್ರಿಕ ಚುನಾವಣೆ- 2026 ಕ್ಕೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 5 ರಂತೆ ಗ್ರಾಮ ಪಂಚಾಯತಿಗೆ ವರ್ಗವಾರು ಸದಸ್ಯರ ಸ್ಥಾನಗಳನ್ನು ಮತ್ತು ಮೀಸಲಾತಿ ನಿಗಧಿಪಡಿಸಿ, ಅಧಿಸೂಚನೆ ಹೊರಡಿಸಿ, ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಪ್ರತಿಗಳನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಸಲ್ಲಿಸಲು ಕ್ರಮ ಕೈಗೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.

ಮೇಲ್ಕಂಡಂತೆ ಜಿಲ್ಲಾಧಿಕಾರಿಗಳು ಪ್ರಕ್ರಿಯೆ ಪೂರ್ಣಗೊಳಿಸಿದ ನಂತರ ಅವಧಿ ಮುಗಿದ ಗ್ರಾಮ ಪಂಚಾಯಿತಿಗಳಿಗೆ ಬಹುತೇಕ ವರ್ಷಾಂತ್ಯದೊಳಗೆ ಚುನಾವಣೆ ನಡೆಸಲು ಕ್ರಮ ಕೈಗೊಳ್ಳಲಾಗುತ್ತದೆ.

ಸಂಖ್ಯೆ:RDPR 791 GPA 2026

Belal

**(ಈಶ್ವರ ಬಿ. ಖಂಡ್ರೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.